# ಧರ್ಮೇಗೌಡ ಆತ್ಮಹತ್ಯೆ ಪ್ರಕರಣ ತನಿಖೆ ಚುರುಕು

ಉವಾ 6/1/21



ಚಿಕ್ಕಮಗಳೂರು: ವಿಧಾನ ಪರಿಷತ್ ಉಪ ಸಭಾಪತಿ ಎಸ್.ಎಲ್. ಧರ್ಮೇಗೌಡ ಅವರ ಆತ್ಮಹತ್ಯೆ ಪ್ರಕರಣ ತನಿಖೆಯನ್ನು ರೈಲ್ವೆ ಇಲಾಖೆ ಪೊಲೀಸರು ಚುರುಕುಗೊಳಿಸಿದ್ದು, ಅವರು ಬರೆದಿರುವ ಮರಣಪತ್ರವನ್ನು ಬೆಂಗಳೂರಿನ ವಿಧಿವಿಜ್ಞಾನ ಪ್ರಯೋಗಾಲಯಕ್ಕೆ ಕಳುಹಿಸಲಾಗಿದೆ ಎಂದು ತಿಳಿದು ಬಂದಿದೆ. ಎಸ್.ಎಲ್. ಧರ್ಮೇಗೌಡ ಅವರು ಆತ್ಮಹತ್ಯೆಗೆ ಶರಣಾಗುವ ಮುನ್ನ ಚಿಕ್ಕಮಗಳೂರು ನಗರ ದಲ್ಲಿ ನಡೆದ ಯಾವ ಕಾರ್ಯಕ್ರಮಗಳಲ್ಲಿ ಭಾಗಿಯಾಗಿದ್ದರೆಂಬ ಕುರಿತು ಮಾಹಿತಿ ಯನ್ನು ರೈಲ್ವೆ ಪೊಲೀಸರು ಕಲೆ ಹಾಕಿದ್ದಾರೆ. ಆತ್ಮಹತ್ಯೆಗೂ ಮುಂಚೆ ಮರಣಪತ್ರ ಬರೆದಿಟ್ಟಿದ್ದಾರೆಂದು ಹೇಳಲಾಗುತ್ತಿದ್ದು, ಅದನ್ನು ಎಲ್ಲೂ ಬಹಿರಂಗಪಡಿಸಿಲ್ಲವಾದ್ದರಿಂದ ಸಾರ್ವಜನಿಕರಲ್ಲಿ ಅನೇಕ ಅನುಮಾನಗಳು ಕಾಡುತ್ತಿದೆ. ರೈಲ್ವೆ ಪೊಲೀಸ್ ಇಲಾಖೆ ತನಿಖೆಯಿಂದ ಸಾವಿಗೆ ನಿಖರ ಕಾರಣ ತಿಳಿದು ಬರಬೇಕಿದೆ.